ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ 01 ಇಎಪಿ 2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು
ದಿನಾಂಕ: 09.09.2024.

**<u>ಸುತ್ತೋಲೆ</u>**

ವಿಷಯ: 2024-25 ನೇ ಶೈಕ್ಷಣಿಕ ಸಾಲಿನಲ್ಲಿ ಸಿ-20 ರ ಪಠ್ಯಕ್ರಮದನ್ವಯ ಸಂಸ್ಥೆಗಳಲ್ಲಿ ಆಂತರಿಕ ಕಿರು ಪರೀಕ್ಷೆಗಳನ್ನು ನಡೆಸಲು ವೇಳಾಪಟ್ಟಿಯನ್ನು ನಿಗದಿಪಡಿಸಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ಸಲ್ಲಿಸುವ ಬಗ್ಗೆ.

ಉಲ್ಲೇಖ:
1. Regulations of C-20 curriculum/scheme of studies.
2. ಸರ್ಕಾರದ ಆದೇಶ ಸಂಖ್ಯೆ: ಇಡಿ/57/ಟಿಪಿಇ/2010, ದಿನಾಂಕ: 17.04.2015.

*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಂಸ್ಥೆಗಳಲ್ಲಿ ಸಿ-20 ಪಠ್ಯಕ್ರಮದಲ್ಲಿ ಸೂಚಿಸಿರುವ scheme of study ಪ್ರಕಾರ ವಿವಿಧ ಪ್ರೋಗ್ರಾಂಗಳಲ್ಲಿನ ಕೋರ್ಸ್/subject ಗಳ ಪಾಠ ಪ್ರವಚನಗಳನ್ನು ಪಠ್ಯಕ್ರಮಗಳಲ್ಲಿ ತಿಳಿಸಿದ ವಾರಗಳಲ್ಲಿ ಕಿರು ಪರೀಕ್ಷೆ/ಇತರೆ ಶೈಕ್ಷಣಿಕ ಚಟುವಟಿಕೆಗಳನ್ನು (CIE) ಜರುಗಿಸಬೇಕಾಗಿದ್ದು, ಅದರನ್ವಯ 2024-25 ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ರೆಗ್ಯುಲರ್ ವಿದ್ಯಾರ್ಥಿಗಳಿಗೆ ಕೋರ್ಸ್‌ವಾರು ಹಾಗೂ ತರಗತಿವಾರು ಆಂತರಿಕ ಕಿರು ಪರೀಕ್ಷೆಗಳನ್ನು ನಡೆಸಲು ವೇಳಾಪಟ್ಟಿಯನ್ನು ನಿಗದಿಪಡಿಸಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ವರದಿ ಸಲ್ಲಿಸುವುದು.

ಕಿರು ಪರೀಕ್ಷೆ ನಡೆಸಲು ನಿಗದಿಪಡಿಸಿದ ದಿನಾಂಕಗಳಂದು ತಾಂತ್ರಿಕ ಪರೀಕ್ಷಾ ಮಂಡಳಿಯ ಪರವಾಗಿ ವಿಚಕ್ಷಣಾ ಅಧಿಕಾರಿಗಳು ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಲಿದ್ದಾರೆಂದು ಎಲ್ಲಾ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ ತಿಳಿಸಲಾಗಿದೆ. ಭೇಟಿ ವೇಳೆ ಕಿರು ಪರೀಕ್ಷೆಗಳ/ಇತರೆ ಶೈಕ್ಷಣಿಕ ಚಟುವಟಿಕೆಗಳ (CIE) ದಾಖಲೆಗಳಾದ ಬ್ಲೂಬುಕ್/ರೆಕಾರ್ಡ್ಸ್ ಇತರೆ ದಾಖಲೆಗಳನ್ನು ಹಾಜರು ಪಡಿಸುವುದು ಜೊತೆಗೆ ಅವುಗಳನ್ನು ಮೌಲ್ಯಮಾಪನ ಮಾಡಿರುವ ಬಗ್ಗೆ ಸ್ಕೀಂ ಆಫ್ ವ್ಯಾಲುಯೇಷನ್ ಮತ್ತು ಮಾದರಿ ಉತ್ತರಗಳನ್ನು ಹಾಜರುಪಡಿಸುವುದು. ಮುಂದುವರೆದು, ಆಂತರಿಕ ಕಿರು ಪರೀಕ್ಷೆಗಳ ಮೌಲ್ಯಮಾಪನವಾದ ಅಂಕಗಳನ್ನು ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್‌ನಲ್ಲಿ 1, 2 ಮತ್ತು 3ನೇ ಕಿರು ಪರೀಕ್ಷೆಗಳು ಮುಗಿದ ಮೂರು ದಿನಗಳೊಳಗಾಗಿ ಅಪ್‌ಲೋಡ್ ಮಾಡುವುದು. ತಪ್ಪಿದಲ್ಲಿ, ಉಲ್ಲೇಖ (2) ರ ಸರ್ಕಾರದ ಆದೇಶದನ್ವಯ ಇಲಾಖಾ ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ.

ಇವರಿಗೆ:
1. ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಸಂಬಂಧಪಟ್ಟ ಎಲ್ಲಾ ವಿಭಾಗಾಧಿಕಾರಿಗಳಿಗೆ – ಪ್ರಾಚಾರ್ಯರ ಮೂಲಕ.

ಪ್ರತಿ:
1. ಆಯುಕ್ತರ ಆಪ್ತಶಾಖೆ – ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತಶಾಖೆ – ಅವಗಾಹನೆಗಾಗಿ.
3. ಇ-ಆಡಳಿತ ವಿಭಾಗ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).
4. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
5. ರಿಜಿಸ್ಟ್ರಾರ್ (ಪರೀಕ್ಷೆ).
6. ಉಪ ನಿರ್ದೇಶಕರು (ಪರೀಕ್ಷೆ).
7. ಕಾರ್ಯದರ್ಶಿಯವರ ಆಪ್ತಶಾಖೆ.
8. ಗಣಕ ಕೇಂದ್ರ ವಿಭಾಗ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.
9. ಕಛೇರಿ ಪ್ರತಿ.